**Akashvani : Bangalore**
**Regional Bulletin In Kannada**
**04.09.2025 / 6.40 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**04.09.2025 / 6.40 pm**

**<><*<><>*><>**

ಮುಖ್ಯಾಂಶಗಳು

೧. ಮುಂಬರುವ ಸ್ಥಳೀಯ ಸಂಸ್ಥೆಯ ಚುನಾವಣೆಯಲ್ಲಿ ಇವಿಎಂ ಬದಲು ಬ್ಯಾಲೆಟ್ ಪೇಪರ್ ಬಳಸುವ ಶಿಫಾರಸ್ಸಿಗೆ ಸಂಪುಟ ಸಭೆ ಅನುಮೋದನೆ

೨. ವಿದೇಶಿ ಬಂಡವಾಳ ಪಟ್ಟಿಯಲ್ಲಿ ರಾಜ್ಯಕ್ಕೆ ಮೊದಲ ಸ್ಥಾನ; ೫೦ ಸಾವಿರದ ೧೦೭ ಕೋಟಿ ಹೂಡಿಕೆ

೩. ಮೈಸೂರಿನಿಂದ ಎಲ್ಲಾ ರಾಜ್ಯಗಳಿಗೆ ರೈಲು ಸೇವೆಗೆ ನಿರ್ಧಾರ - ಕೇಂದ್ರ ಸಚಿವ ವಿ.ಸೋಮಣ್ಣ

೪. ಧರ್ಮಸ್ಥಳ ಪ್ರಕರಣ- ವಿದೇಶಿ ಹಣದ ಹರಿವಿನ ಕುರಿತಂತೆ ಕೇಂದ್ರ ಸರ್ಕಾರ ಪರಿಶೀಲನೆ - ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟನೆ

೫. ನಾಳೆ ಬೆಂಗಳೂರಿನಲ್ಲಿ ಶಿಲ್ಪ ಸಮಾಗಮ ಮೇಳ, ಕೇಂದ್ರ ಸಚಿವರಾದ ವಿರೇಂದ್ರ ಕುಮಾರ್, ರಾಮ್‌ದಾಸ್ ಅಠವಾಳೆ ಚಾಲನೆ

**><><><*><><><**

ಮುಂಬರುವ ಎಲ್ಲ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಇವಿಎಂ ಬದಲಿಗೆ ಬ್ಯಾಲೆಟ್ ಪೇಪರ್ ಮೂಲಕ ಚುನಾವಣೆ ನಡೆಸುವ ಶಿಫಾರಸ್ಸಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಂಪುಟ ಸಭೆ ಅನುಮೋದನೆ ನೀಡಿದೆ. ರಾಜ್ಯ ಚುನಾವಣಾ ಆಯೋಗ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಮತದಾರರ ಪಟ್ಟಿಯನ್ನು ಸಿದ್ದಪಡಿಸಲು, ಮತದಾರರ ಪಟ್ಟಿ ಪರಿಷ್ಕರಣೆ ಮಾಡಲು ಅಗತ್ಯ ಕಾನೂನು ತಿದ್ದುಪಡಿ ತರಲು, ನಿಯಮಾವಳಿ ರಚನೆ ಮಾಡಲು ಸಂಪುಟ ಒಪ್ಪಿಗೆ ನೀಡಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್ ಕೆ ಪಾಟೀಲ್ ತಿಳಿಸಿದ್ದಾರೆ.

ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ ಕೆಲವು ವರ್ಗಗಳ ಕಟ್ಟಡಗಳಿಗೆ ಸ್ವಾಧೀನಾನುಭವ ಪತ್ರ ಪಡೆಯುವ ಕುರಿತಂತೆ ವಿನಾಯಿತಿ ನೀಡಲು ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ. ಕನಕಪುರದಲ್ಲಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಒಪ್ಪಿಗೆ ನೀಡಲಾಗಿದೆ. ೬೫ ಕೋಟಿ ರೂಪಾಯಿ ಮೊತ್ತದ ೨೫ ಎಕರೆ ಜಮೀನು ಖರೀದಿಸಲು ಸಂಪುಟ ನಿರ್ಧರಿಸಿದೆ. ಸರ್ಕಾರಿ ಶಾಲಾ ಮಕ್ಕಳಿಗೆ ರಾಗಿ ಮಾಲ್ಟ್ ವಿತರಣೆ ವಾರದ ಮೂರು ದಿನದ ಬದಲು ಐದು ದಿನಕ್ಕೆ ವಿಸ್ತರಿಸಲಾಗಿದೆ.

><><><*><><><

ರಾಜ್ಯಗಳು ಸ್ವೀಕರಿಸಿದ ವಿದೇಶಿ ಬಂಡವಾಳ ಪಟ್ಟಿಯಲ್ಲಿ ಕರ್ನಾಟಕವು ಮೊದಲ ಸ್ಥಾನದಲ್ಲಿದ್ದು, ೫೦ ಸಾವಿರದ ೧೦೭ ಕೋಟಿ ಬಂಡವಾಳ ರಾಜ್ಯಕ್ಕೆ ಹರಿದುಬಂದಿದೆ. ಕಳೆದ ಹಲವು ವರ್ಷಗಳಿಂದ ಮೊದಲ ಸ್ಥಾನದಲ್ಲಿದ್ದ ಮಹಾರಾಷ್ಟ್ರವನ್ನು ಹಿಂದಿಕ್ಕಿ ರಾಜ್ಯ ಪ್ರಥಮ ಸ್ಥಾನ ತಲುಪಿದೆ. ಇದು ಕರ್ನಾಟಕದ ಬಗೆಗೆ ಅಂತಾರಾಷ್ಟ್ರೀಯ ಹೂಡಿಕೆದಾರರು ಹೊಂದಿರುವ ವಿಶ್ವಾಸ ಮತ್ತು ಭರವಸೆಯನ್ನು ಪ್ರತಿಬಿಂಬಿಸುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಕರ್ನಾಟಕದ ಈ ಸಾಧನೆಗೆ ಸರ್ಕಾರದ ನೀತಿಗಳು ರಾಜ್ಯದಲ್ಲಿ ಹೂಡಿಕೆಸ್ನೇಹಿ ಪರಿಸರ ನಿರ್ಮಿಸಿರುವುದು ಕಾರಣ ಎಂದು ಹೇಳಿದ್ದಾರೆ.

><><><*><><><

ಭಾರತದ ಎಲ್ಲಾ ರಾಜ್ಯಗಳಿಗೆ ಮೈಸೂರಿನಿಂದ ರೈಲು ಸೇವೆಗೆ ನಿರ್ಧರಿಸಲಾಗಿದೆ ಎಂದು ಕೇಂದ್ರ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ಈ ಕುರಿತು ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನಷ್ಟೇ ಮೈಸೂರಿಗೂ ಆದ್ಯತೆ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ನಂಜನಗೂಡಿನ ಹೃದಯ ಭಾಗದಲ್ಲಿರುವ ಲೆವೆಲ್ ಕ್ರಾಸಿಂಗ್ ಬಳಿ ಮೇಲ್ಸೇತುವೆ ನಿರ್ಮಾಣ ಮಾಡಲಾಗುವುದು ಎಂದು ತಿಳಿಸಿದ್ದಾರೆ. ದಸರಾ ಉದ್ಘಾಟಕರು ಚಾಮುಂಡಿ ಬೆಟ್ಟದ ಸಂಪ್ರದಾಯ ಇತಿಹಾಸ ಹಾಗೂ ಸಂಪ್ರದಾಯ ಪಾಲಿಸುವಂತೆ ಸಲಹೆ ನೀಡಿದ್ದಾರೆ.

><><><*><><><

ದೇಶದಲ್ಲೇ ಪ್ರಥಮ ಬಾರಿಗೆ ರಾಜ್ಯಾದ್ಯಂತ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆ ಹಾಗೂ ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು

ಚಾಲನೆ ನೀಡಿದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮತ್ತು ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು. ಈಗಾಗಲೇ ಪ್ರಾಯೋಗಿಕವಾಗಿ ಮೈಸೂರು ಮತ್ತು ವಿಜಯಪುರ ಜಿಲ್ಲೆಗಳಲ್ಲಿ ೨೦೨೩ರಲ್ಲಿ ೪೫ ದಿನಗಳ ಕಾಲ ಸಮೀಕ್ಷೆ ನಡೆಸಲಾಗಿದೆ.

><><><*><><><

ಧರ್ಮಸ್ಥಳ ಪ್ರಕರಣದಲ್ಲಿ ವಿದೇಶಿ ಹಣದ ಹರಿವಿನ ಕುರಿತಂತೆ ಕೇಂದ್ರ ಸರ್ಕಾರ ಪರಿಶೀಲನೆ ನಡೆಸಲಿದೆ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಾರಿ ನಿರ್ದೇಶನಾಲಯ ಈಗಾಗಲೇ ಈ ಕುರಿತಂತೆ ಮಾಹಿತಿ ಸಂಗ್ರಹಿಸುತ್ತಿದೆ ಎಂದು ಹೇಳಿದ್ದಾರೆ. ಇದೇವೇಳೆ ಸೌಜನ್ಯ ಪ್ರಕರಣ ಕುರಿತಂತೆ ಪ್ರತಿಕ್ರಿಯಿಸಿದ ಅವರು ಎಸ್ಐಟಿ ಅಧಿಕಾರಿಗಳು ಯಾವ ಆಧಾರದಲ್ಲಿ ತನಿಖೆ ನಡೆಸುತ್ತಿದ್ದಾರೆ ಎಂಬುದು ತಿಳಿದಿಲ್ಲ ಎಂದು ತಿಳಿಸಿದ್ದಾರೆ.

><><><*><><><

ಧರ್ಮಸ್ಥಳ ಪ್ರಕರಣವನ್ನು ಎನ್ಐಎ ತನಿಖೆಗೆ ನೀಡುವಂತೆ ಒತ್ತಾಯಿಸಿ ರಾಜ್ಯದ ಮಠಾಧೀಶರ ನಿಯೋಗ ದೆಹಲಿಯಲ್ಲಿಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಲ್ಲಿ ಮನವಿ ಮಾಡಿದೆ. ವಿಶೇಷ ತನಿಖಾ ತಂಡದ ತನಿಖೆಗೆ ಯಾವುದೇ ಆಕ್ಷೇಪ ಇಲ್ಲ. ಆದರೆ, ಧರ್ಮಸ್ಥಳದ ವಿರುದ್ಧ ನಡೆಯುತ್ತಿರುವ ಪಿತೂರಿಯನ್ನು ಬಹಿರಂಗಪಡಿಸಲು ಎನ್ಐಎಗೆ ಹಸ್ತಾಂತರಿಸಬೇಕು ಎಂದು ಒತ್ತಾಯಿಸಿದೆ. ಹರಿಹರ ವೀರಶೈವ ಲಿಂಗಾಯತ ಪಂಚಮಶಾಲಿ ಪೀಠದ ವಚನಾಂದ ಸ್ವಾಮೀಜಿ ನೇತೃತ್ವದಲ್ಲಿ ಇತರ ಏಳು ಪ್ರಮುಖ ಧಾರ್ಮಿಕ ಮಠಾಧೀಶರು ನಿಯೋಗದಲ್ಲಿದ್ದರು.

><><><*><><><

ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದಿಂದ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಾಳೆ "ಶಿಲ್ಪ ಸಮಾಗಮ ಮೇಳ ೨೦೨೫" ಆಯೋಜಿಸಲಾಗಿದೆ. ಸಂಜೆ ೪ ಗಂಟೆಗೆ "ಶಿಲ್ಪ ಸಮಾಗಮ ಮೇಳ" ಉದ್ಘಾಟನೆಗೊಳ್ಳಲಿದ್ದು, ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ಡಾ. ವೀರೇಂದ್ರ ಕುಮಾರ್ ಹಾಗೂ ರಾಜ್ಯ ಖಾತೆ ಸಚಿವ ರಾಮದಾಸ್ ಅಠಾವಳೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಸೆಪ್ಟೆಂಬರ್ ೧೪ರ ವರೆಗೆ ೧೦ ದಿನಗಳ ಕಾಲ,

ಮೇಳ, ನಡೆಯಲಿದ್ದು, ಸಾರ್ವಜನಿಕರಿಗೆ ಮುಕ್ತ ಪ್ರವೇಶವಿರಲಿದೆ. "ಶಿಲ್ಪ ಸಮಾಗಮ ಮೇಳ"ದಲ್ಲಿ ದೇಶದ ವಿವಿಧ ರಾಜ್ಯಗಳ ನೂರಕ್ಕೂ ಅಧಿಕ ಪರಿಶಿಷ್ಟ ಜಾತಿ, ಹಿಂದುಳಿದ ವರ್ಗ, ಸ್ವಚ್ಛತಾ ಮಿತ್ರರು, ಅಲೆಮಾರಿ ವನವಾಸಿ ಸಮುದಾಯದ ಕುಶಲಕರ್ಮಿಗಳಿಂದ ತಯಾರಾದ ಗೃಹ ಉಪಯೋಗಿ, ಅಲಂಕಾರಿಕ, ಕೈಮಗ್ಗ ಮುಂತಾದ ಸ್ವದೇಶಿ ಉತ್ಪನ್ನಗಳ ಹಾಗೂ ದೇಸಿ ಸೊಗಡಿನ ಖಾದ್ಯಗಳ ಪ್ರದರ್ಶನ ನಡೆಯಲಿದೆ. 'ವೋಕಲ್ ಫಾರ್ ಲೋಕಲ್' ಸಂಕಲ್ಪದ ಸಾಕಾರ ರೂಪವಾಗಿ ಈ ಮೇಳ ಆಯೋಜನೆಗೊಂಡಿದೆ.

><><><*><><><

ವಿಶ್ವವಿದ್ಯಾಲಯಗಳು ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ಒದಗಿಸುವುದರ ಜೊತೆಗೆ ಪರಿಸರ ಸಂರಕ್ಷಣೆಯ ಕಡೆಗೆ ಸಕ್ರಿಯ ಪ್ರಯತ್ನಗಳನ್ನು ಮಾಡಬೇಕು ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ತಿಳಿಸಿದ್ದಾರೆ. ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ೧೩ನೇ ವಾರ್ಷಿಕ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ವಿಶ್ವವಿದ್ಯಾಲಯದ ಆವರಣವನ್ನು ಸ್ವಚ್ಛವಾಗಿಡಲು ಒಂದು ಅಥವಾ ಎರಡು ತಿಂಗಳಿಗೊಮ್ಮೆ ಸ್ವಚ್ಛತಾ ಅಭಿಯಾನ ನಡೆಸಬೇಕು ಎಂದು ಕರೆ ನೀಡಿದ್ದಾರೆ. ಘಟಿಕೋತ್ಸವದಲ್ಲಿ ಡಾ.ವಸುಂಧರಾ ಭೂಪತಿ, ಬಿ.ನಾಗನಗೌಡ ಮತ್ತು ಇರ್ಫಾನ್ ರಜಾಕ್ ಅವರಿಗೆ ಶಿಕ್ಷಣ, ಸಾಹಿತ್ಯ, ಆರೋಗ್ಯ ಮತ್ತು ಸಾಮಾಜಿಕ ಕಾರ್ಯ ಕ್ಷೇತ್ರದಲ್ಲಿ ಅತ್ಯುತ್ತಮ ಕೆಲಸಕ್ಕಾಗಿ ಗೌರವ ಪದವಿಗಳನ್ನು ನೀಡಿ ಗೌರವಿಸಲಾಗಿದೆ.

><><><*><><><

ಜಿಎಸ್‌ಟಿ ಮಂಡಳಿ ಸಭೆಯಲ್ಲಿ ಕ್ರಾಂತಿಕಾರಿ, ಹಾಗೂ ಐತಿಹಾಸಿಕ ಸುಧಾರಣೆಯ ನಿರ್ಧಾರ ಮಾಡಲಾಗಿದೆ ಎಂದು ಮಾಜಿ ಉಪಮುಖ್ಯಮಂತ್ರಿ, ಶಾಸಕ ಡಾ. ಸಿ.ಎನ್. ಅಶ್ವತ್ಥನಾರಾಯಣ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜೀವ ರಕ್ಷಣೆ, ಆರೋಗ್ಯ ರಕ್ಷಣೆ, ಕೃಷಿಕರಿಗೆ ನೆರವು ಸಿಗಲಿದೆ ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರವು ಜಿಎಸ್‌ಟಿ ಯನ್ನು ಮತ್ತಷ್ಟು ಜನಸ್ನೇಹಿ ಹಾಗೂ ಸರಳೀಕರಣಗೊಳಿಸುವ ಮೂಲಕ ದೇಶದ ಆರ್ಥಿಕತೆಗೆ ನವಚೈತನ್ಯ ತುಂಬಿದೆ ಎಂದು ಮಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ಡಿ.ವೇದವ್ಯಾಸ ಕಾಮತ್ ತಿಳಿಸಿದ್ದಾರೆ.

><><><*><><><

ಕೃಷಿ ಉಪಕರಣಗಳ ಮೇಲಿನ ಶೇಕಡ ೧೨ರಷ್ಟಿದ್ದ ಜಿಎಸ್‌ಟಿಯನ್ನು ಶೇಕಡ ೫ಕ್ಕೆ ಇಳಿಕೆ ಮಾಡಿರುವುದು ಸ್ವಾಗತಾರ್ಹ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯಾಧ್ಯಕ್ಷ ಕಲ್ವಮಂಜಲಿ ರಾಮು ಶಿವಣ್ಣ ಕೋಲಾರದಲ್ಲಿ ತಿಳಿಸಿದ್ದಾರೆ.

**ಧ್ವನಿ- ರಾಮು ಶಿವಣ್ಣ, ಹಸಿರು ಸೇನೆಯ ರಾಜ್ಯಾಧ್ಯಕ್ಷ**

ಸಿಮೆಂಟ್ ಮೇಲಿನ ಜಿಎಸ್‌ಟಿಯನ್ನು ಶೇಕಡ ೨೮ರಿಂದ ಶೇಕq ೧೮ಕ್ಕೆ ಇಳಿಕೆ ಮಾಡಿರುವುದರಿಂದ ಜನಸಾಮಾನ್ಯರಿಗೆ ಅನುಕೂಲವಾಗಲಿದೆ ಎಂದು ಗಂಗಾವತಿ ನಗರದ ಯುವ ಉದ್ಯಮಿ ಸಂಗಮೇಶ ಸುಗ್ರೀವ ಅಭಿಪ್ರಾಯ ಪಟ್ಟಿದ್ದಾರೆ.

**ಧ್ವನಿ- ಂಗಮೇಶ ಸುಗ್ರೀವ ಉದ್ಯಮಿಗಳು ಗಂಗಾವತಿ**

><><><*><><><

ದಕ್ಷಿಣ ಕನ್ನಡ ಜಿಲ್ಲೆಯ ಮೂಲ ನಿವಾಸಿಗಳಾದ ಬುಡಕಟ್ಟು ಸಮುದಾಯ ಕೊರಗ ಜನಾಂಗದ ಸಮಸ್ಯೆಗೆ ಪರಿಹಾರವಾಗಬೇಕಾದರೆ ಅತಿ ಮುಖ್ಯ ಬೇಡಿಕೆಯಾದ 'ಭೂಮಿ ಹಕ್ಕಿನ' ಬೇಡಿಕೆ ಇತ್ಯರ್ಥವಾಗಬೇಕು ಎಂದು ಕೊರಗ ಸಮುದಾಯದ ಮುಖಂಡರು ಆಗ್ರಹಿಸಿದ್ದಾರೆ. ಮಂಗಳೂರಿನಲ್ಲಿಂದು ನಡೆದ ಕೊರಗರ ಅಭಿವೃದ್ಧಿ ಸಭೆಯಲ್ಲಿ ಮಾತನಾಡಿದ ಸಮುದಾಯದ ಮುಖಂಡರು, ಭೂಮಿ ಇಲ್ಲದೆ ಯಾವುದೇ ಯೋಜನೆ ಮಾಡಲಾಗದು. ಭೂಮಿ ಒದಗಿಸಿ ಕೊರಗರಿಗೆ ಘನತೆಯ ಬದುಕು ಒದಗಿಸಿ ಎಂದು ಅಧಿಕಾರಿಗಳನ್ನು ಒತ್ತಾಯಿಸಿದರು.

><><><*><><><